**<u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.</u>**

**<u>ಹಿರೇಕೆರೂರು.</u>**

**<u>ಸಿ.ಸಿ.ನಂಬರ್ಃ 57/2023</u>**

ಸಿಡಬ್ಲ್ಯೂಃ 1

ಪಿಡಬ್ಲ್ಯೂಃ 1

| | | |
|---|---|---|
| ಸಾಕ್ಷಿಯ ಹೆಸರು | : | ಶಬ್ಬೀರ |
| ತಂದೆಯ ಹೆಸರು | : | ಮಖಬೂಲ್ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಚಿಕ್ಕೇರೂರ |

ಇಂದು ದಿನಾಂಕಃ 09.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**<u>ಮುಖ್ಯ ವಿಚಾರಣೆಃ</u>** ಮಾನ್ಯ ಎಪಿಪಿಯವರಿಂದಃ

ಚಾಸಾ-2 ಮತ್ತು 3 ರವರ ಪರಿಚಯ ನನಗೆ ಇರುತ್ತದೆ. ಚಾಸಾ-4 ನನ್ನ ತಮ್ಮ. ಆರೋಪಿತರ ಪರಿಚಯ ನನಗೆ ಇರುತ್ತದೆ. ಚಾಸಾ-5 ಮತ್ತು 6 ರವರು ಪರಿಚಯ ನನಗೆ ಇರುತ್ತದೆ. ಸುಮಾರು 3 ವರ್ಷಗಳ ಹಿಂದೆ ನಮ್ಮ ಚಿಕ್ಕೇರೂರ ಹೊಲದಲ್ಲಿ ಆರೋಪಿತರು ದನವನ್ನು ಬಿಟ್ಟಿದ್ದರು, ಅದನ್ನು ಹೊಡೆದುಕೊಳ್ಳಿ ಎಂದು ಹೇಳಿದಾಗ ಆಗ ಆರೋಪಿತರು ಸುಮಾರು 6 ರಿಂದ 7 ಜನ ಬಂದು ಅವಾಚ್ಯ ಶಬ್ದಗಳಿಂದ ಬೈಯ್ದು, ಕೈಗಳಿಂದ ಹೊಡೆದಿರುತ್ತಾರೆ. 3 ನೇ ಆರೋಪಿ ಲಾಂಗ್ ನಿಂದ ನನ್ನ ತಲೆಗೆ ಹೊಡೆದಿರುತ್ತಾರೆ. ಎಲ್ಲಾ ಆರೋಪಿತರು ಕಲ್ಲಿನಿಂದ ನನಗೆ ಹೊಡೆದಿರುತ್ತಾರೆ. ಆಗ ಚಾಸಾ-4 ರವರು ಅದನ್ನು ನೋಡಿ ಗಲಾಟೆ ಬಿಡಿಸಲು ಬಂದಿದ್ದು, ಆಗ ಆರೋಪಿತರೆಲ್ಲರೂ ಸೇರಿ ಚಾಸಾ-4 ರವರನ್ನು ಹೊಡೆದಿರುತ್ತಾರೆ. ನಂತರ ನಾವು ಹಿರೇಕರೂರ ಆಸ್ಪತ್ರೆಗೆ ಹೋಗಿದ್ದು, ಅಲ್ಲಿಂದ ಹಾವೇರಿ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಕಳುಹಿಸಿಕೊಟ್ಟಿರುತ್ತಾರೆ. ನಂತರ ಹಾವೇರಿ ಸರ್ಕಾರ ಆಸ್ಪತ್ರೆಗೆ ಬಂದು ನನ್ನ ಹೇಳಿಕೆಯ ದೂರನ್ನು ಪಡೆದುಕೊಂಡಿರುತ್ತಾರೆ. ಸಾಕ್ಷಿಗೆ ಸದರಿ ಹೇಳಿಕೆ ದೂರು ದಾಖಲೆಯನ್ನು ತೋರಿಸಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿದ ಮೇರೆಗೆ ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

2. ನಂತರ 4 ದಿನಗಳ ನಂತರ ಪೋಲಿಸರು ಕೃತ್ಯ ಸ್ಥಳಕ್ಕೆ ಬೇಟಿ ನೀಡಿ ನಾನು ತೋರಿಸಿದ ಜಾಗದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮದಲ್ಲಿ ಪಂಚನಾಮೆಯನ್ನು ಸಂಜೆ 4.30 ರಿಂದ 5.00 ಗಂಟೆಯವರೆಗೆ ಮಾಡಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಆ ಸಮಯದಲ್ಲಿ ಒಂದು

ಲಾಂಗ್ ಹಾಗೂ ಬಡಿಗೆಯನ್ನು ವಶಪಡಿಸಿಕೊಂಡಿರುತ್ತಾರೆ. ಸಾಕ್ಷಿಗೆ ಪಂಚನಾಮೆ ಎಂಬ ದಾಖಲೆಯನ್ನು ತೋರಿಸಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿದ ಮೇರೆಗೆ ಅದನ್ನು ನಿಪಿ–2 ಎಂದು, ಸಾಕ್ಷಿಯ ಸಹಿಯನ್ನು ನಿಪಿ–2(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಹಂಸಬಾವಿ ಪೋಲಿಸರು ಸ್ವತ್ತುಗಳನ್ನು ನ್ಯಾಯಾಲಯದ ಮುಂದೆ ಹಾಜರಪಡಿಸಿರುವುದಿಲ್ಲ ಆ ಕಾರಣದಿಂದ ಫ್ರಾಸಾ–1 ರವರ ಸಾಕ್ಷ ವಿಚಾರಣೆಯನ್ನು ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.